ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012**

ಸಂಖ್ಯೆ: ಪಪೂಶಿಇ/ಪ್ರ.ಜಿ.ಉ/02/2019-20 ದಿನಾಂಕ: 19.08.2019

**ಸುತ್ತೋಲೆ**

**ವಿಷಯ:** ಪ್ರವಾಹ ಪೀಡಿತ ಜಿಲ್ಲೆಗಳ ಸರ್ಕಾರಿ/ಖಾಸಗಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ಮೂಲಭೂತ ಸೌಲಭ್ಯಗಳ ಸುಧಾರಣೆ ಮಾಡಲು ಉಸ್ತುವಾರಿಗಾಗಿ ಸಮಿತಿಯನ್ನು ರಚಿಸುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರವಾಹ ಪೀಡಿತ ಜಿಲ್ಲೆಗಳಲ್ಲಿ ಪ್ರಸ್ತುತ ತೀವ್ರವಾಗಿ ಮಳೆ ಸುರಿದ ಪರಿಣಾಮವಾಗಿ ಸಾರ್ವಜನಿಕ ಆಸ್ತಿಪಾಸ್ತಿಗಳು ಹಾಗೂ ಇತ್ಯಾದಿಗಳಿಗೆ ಹಾನಿ ಉಂಟಾಗಿರುತ್ತದೆ. ಅದರಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ/ಖಾಸಗಿ ಪದವಿ ಪೂರ್ವ ಕಾಲೇಜುಗಳ ಕಟ್ಟಡಗಳು ಹಾನಿಯಾಗಿದ್ದು, ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗಿರುತ್ತದೆ.

ಆದ್ದರಿಂದ ಪ್ರವಾಹ ಪೀಡಿತ ಜಿಲ್ಲೆಗಳ ಪದವಿ ಪೂರ್ವ ಕಾಲೇಜುಗಳ ಮೂಲಭೂತ ಸೌಲಭ್ಯಗಳು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಹಾಗೂ ಸುಧಾರಣೆಗಾಗಿ ಇಲಾಖೆಯು ಸಾಕಷ್ಟು ಕ್ರಮಗಳನ್ನು ಕೈಗೊಳ್ಳುತ್ತಿದ್ದು, ಈ ಕ್ರಮಗಳ ಅನುಷ್ಠಾನದ ಮತ್ತು ಹೆಚ್ಚಿನ ಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ ಉಸ್ತುವಾರಿ ನೋಡಿಕೊಳ್ಳಲು ಮತ್ತು ಇಲಾಖೆಗೆ ಆಗಿಂದಾಗ್ಗೆ ಮಾಹಿತಿಯನ್ನು ಒದಗಿಸಲು ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಶಕರ ಅದ್ಯಕ್ಷತೆಯಲ್ಲಿ ಸರ್ಕಾರಿ ಮತ್ತು ಖಾಸಗಿ ಪದವಿ ಪೂರ್ವ ಕಾಲೇಜುಗಳ ಐದು ಜನ ಪ್ರಾಂಶುಪಾಲರುಗಳನ್ನೊಳಗೊಂಡ ಸಮಿತಿಯನ್ನು ರಚಿಸಲು ಸೂಚಿಸಿದೆ ಹಾಗೂ ಶೈಕ್ಷಣಿಕ ಪ್ರಗತಿಯ ದೃಷ್ಠಿಯಿಂದ ಅಗತ್ಯಕ್ರಮಗಳನ್ನು ತೆಗೆದುಕೊಳ್ಳಲು ಅಧಿಕಾರ ನೀಡಲಾಗಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ.**
**– ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ**

ಪ್ರತಿಗಳು:

1. ಜಂಟಿ ನಿರ್ದೇಶಕರು (ಶೈಕ್ಷಣಿಕ) (ಪರೀಕ್ಷೆ) (ಆಡಳಿತ) ಪದವಿ ಪೂರ್ವ ಶಿಕ್ಷಣ ಇಲಾಖೆ.
2. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಶಾಖೆಯವರಿಗೆ.
3. ಕಛೇರಿ ಪ್ರತಿ.